ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ನೀಡಲಾದ ಆರ್ಥಿಕ ನೆರವಿನ ಬಗ್ಗೆ

ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):-

625 (819) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಜನಪದ ಮತ್ತು ವಾದ್ಯ ಸಂಗೀತ ಕಲಾವಿದರಿಗೆ ವೇಷ ಭೂಷಣ ಹಾಗೂ ವಾದ್ಯ ಪರಿಕರಗಳ ಖರೀದಿಗೆ ಆರ್ಥಿಕ ನೆರವು ನೀಡುವ ಕಾರ್ಯ ಕ್ರಮ ಹಮ್ಮಿಕೊಳ್ಳಲಾಗಿದ್ದು, ಈ ಕಾರ್ಯಕ್ರಮವನ್ನು ಮುಂದುವರೆಸಿ ಆರ್ಥಿಕ ನೆರವು ನೀಡಲಾಗುತ್ತಿದೆಯೇ;

(ಆ) ಹಾಗಿದ್ದಲ್ಲಿ, ಇದುವರೆಗೂ ಎಷ್ಟು ಜನ ಫಲಾನುಭವಿಗಳಿಗೆ ಆರ್ಥಿಕ ನೆರವನ್ನು ಒದಗಿಸಲಾಗಿದೆ;

(ಇ) ಕಾರ್ಯಕ್ರಮ ಜಾರಿಗೊಳಿಸದಿದ್ದಲ್ಲಿ ಕಾರಣವೇನು; ಈ ಕಾರ್ಯಕ್ರಮ ಜಾರಿಗೊಳಿಸುವುದು ಯಾವಾಗ ? (ಸಂಪೂರ್ಣ ಮಾಹಿತಿ ನೀಡುವುದು)